# HC declines interim order over OCI students' eligibility

**BENGALURU: The Karnataka High Court declined to grant an interim order in a petition concerning eligibility of Overseas Citizens of India (OCI) students under management quota seats.**

A division bench headed by Justice H G Ramesh was hearing a batch of petitions filed by Colleen P Mallier and several other OCI students challenging the Rule 5 (1) of Karnataka Selection of Candidates for Admission to Government seats in Professional Educational Institutions Rules, 2006 which provides powers to restrict admission to the Indian citizens only.



The petitioners have moved the court seeking directions to the state government to consider the OCI students for non-government seats by treating them on par with Non-Resident Indians (NRIs) for admission to first year MBBS courses.

They have also contended that various states including Kerala, Maharashtra, Gujarat have already made provisions for admission of students belonging to the OCI category who hail from respective states to be granted seats under the government or management quota.

The court stated that it can't pass an interim order as a similar matter is pending before the Supreme Court.

The bench deferred hearing of the case to July 18 awaiting the Apex court's decision in the matter.

**DH News Service**

## ಎಂಜಿನಿಯರಿಂಗ್ ಪ್ರವೇಶ ಶುಲ್ಕ ಶೇ. 10, ವೈದ್ಯ ಶುಲ್ಕ ಶೇಕಡಾ 8 ಹೆಚ್ಚಳಕ್ಕೆ ಸಮ್ಮತಿ

# ಆಪ್ಷನ್ ಎಂಟ್ರಿ ಬಿಕ್ಕಟ್ಟು ಅಂತ್ಯ

**ವಿಕ ಸುದ್ದಿಲೋಕ** ಬೆಂಗಳೂರು

ವೃತ್ತಿಪರ ಕೋರ್ಸ್‌ಗಳ ಪ್ರವೇಶ ಶುಲ್ಕ ನಿಗದಿಗೆ ಸಂಬಂಧಿಸಿದಂತೆ ರಾಜ್ಯ ಸರಕಾರ ಹಾಗೂ ಖಾಸಗಿ ವೃತ್ತಿಪರ ಶಿಕ್ಷಣ ಸಂಸ್ಥೆಗಳ ನಡುವಿನ ತಿಕ್ಕಾಟಕ್ಕೆ ಕೊನೆಗೂ ತೆರೆ ಬಿದ್ದಿದೆ. ಎಂಜಿನಿಯರಿಂಗ್ ಪ್ರವೇಶ ಶುಲ್ಕವನ್ನು ಶೇ. 10 ಹಾಗೂ ವೈದ್ಯ ಕೋರ್ಸ್‌ಗಳ ಶುಲ್ಕವನ್ನು ಶೇ. 8ರಷ್ಟು ಹೆಚ್ಚಿಸಲು ಸಮ್ಮತಿಸಲಾಗಿದೆ.

ಇದರಿಂದಾಗಿ, ವೈದ್ಯ ಹಾಗೂ ಎಂಜಿನಿಯರಿಂಗ್ ಕೋರ್ಸ್‌ಗಳ ಪ್ರವೇಶಕ್ಕಾಗಿ ಪರಿತಪಿಸುತ್ತಿದ್ದ ಲಕ್ಷಾಂತರ ವಿದ್ಯಾರ್ಥಿಗಳು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ. ರಾಜ್ಯ ಸರಕಾರ ಖಾಸಗಿ ಕಾಲೇಜುಗಳಲ್ಲಿನ ಸರಕಾರಿ ಕೋಟಾದ ಸೀಟುಗಳ ಹಂಚಿಕೆ ಪಟ್ಟಿ ನೀಡಿದಲ್ಲಿ ಒಂದೆರಡು ದಿನಗಳಲ್ಲೇ ಆಪ್ಷನ್ ಎಂಟ್ರಿಗೆ ಅವಕಾಶ ಕಲ್ಪಿಸಲಾಗುವುದು ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಅಧಿಕಾರಿಗಳು ತಿಳಿಸಿದ್ದಾರೆ.

»06

### ಶುಲ್ಕ ಹೆಚ್ಚಳ ಎಷ್ಟು?

- ಖಾಸಗಿ ಎಂಜಿನಿಯರಿಂಗ್ ಕಾಲೇಜುಗಳಲ್ಲಿನ ಸರಕಾರಿ ಕೋಟಾದ ಸೀಟುಗಳ ಪ್ರವೇಶ ಶುಲ್ಕ 65,000 ರೂ.ಗಳಿದ್ದು, ಶೇ. 10ರಷ್ಟು ಶುಲ್ಕ ಹೆಚ್ಚಳದಿಂದ 71,500 ರೂ.ಗೆ ಏರಿದೆ.
- ವೈದ್ಯಕೀಯ ಕೋರ್ಸ್‌ಗಳ ಶುಲ್ಕ ಶೇ. 8ರಷ್ಟು ಏರಿಕೆಯಾಗಲಿದೆ. 2017-18ರಲ್ಲಿದ್ದ 77,000 ರೂ. ಈ ವರ್ಷ 83,160 ರೂ. ನಿಗದಿಯಾಗಲಿದೆ.
- ಖಾಸಗಿ ವೈದ್ಯ ಕಾಲೇಜುಗಳಲ್ಲಿ ಇನ್‌ಸ್ಟಿಟ್ಯೂಷನಲ್ ಕೋಟಾದ ಸೀಟುಗಳ ಪ್ರವೇಶ ಶುಲ್ಕ 6.32 ಲಕ್ಷ ರೂ.ಗಳಷ್ಟಿದ್ದು, ಈ ವರ್ಷ 50,560 ರೂ. ಏರಿಕೆಯಾಗಲಿದೆ. ವಿದ್ಯಾರ್ಥಿಗಳು 6,82,560 ರೂ. ಶುಲ್ಕ ಭರಿಸಬೇಕಾಗುತ್ತದೆ.

ವಿಜಯ ಕರ್ನಾಟಕ



# ಆಪ್ಷನ್ ಎಂಟ್ರಿ: ಬಿಕ್ಕಟ್ಟು ಅಂತ್ಯ

» ಮೊದಲ ಪುಟದಿಂದ

ಉನ್ನತ ಶಿಕ್ಷಣ ಪರಿಷತ್ ಸಭಾಂಗಣದಲ್ಲಿ ಗುರುವಾರ ಉನ್ನತ ಶಿಕ್ಷಣ ಸಚಿವ ಜಿ. ಟಿ. ದೇವೇಗೌಡ ಹಾಗೂ ಖಾಸಗಿ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಸಂಘದ ಕಾರ್ಯದರ್ಶಿ ಎಂ. ಕೆ. ಪಾಂಡುರಂಗ ಶೆಟ್ಟಿ ಸಮ್ಮುಖದಲ್ಲಿ ನಡೆದ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ.

ಖಾಸಗಿ ಎಂಜಿನಿಯರಿಂಗ್ ಕಾಲೇಜುಗಳಲ್ಲಿನ ಸರಕಾರಿ ಕೋಟಾದ ಸೀಟುಗಳ ಪ್ರವೇಶ ಶುಲ್ಕವನ್ನು ಶೇ. 30ರಷ್ಟು ಹೆಚ್ಚಿಸುವಂತೆ ಖಾಸಗಿ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿ ಪಟ್ಟು ಹಿಡಿದಿತ್ತು. ಆದರೆ, ಶೇ. 8ರಷ್ಟು ಶುಲ್ಕ ಹೆಚ್ಚಳಕ್ಕೆ ಸರಕಾರ ಹಾಗೂ ಖಾಸಗಿ ಕಾಲೇಜುಗಳು ಸಮ್ಮತಿಸಿವೆ. ಸಿಎಂ ಕುಮಾರಸ್ವಾಮಿ ಅಧ್ಯಕ್ಷತೆಯಲ್ಲಿ ನಡೆದ ಮೊದಲ ಸಭೆ ಹಾಗೂ ಆನಂತರ ನಡೆದ ಮೂರ್‍ನಾಲ್ಕು ಸಭೆಗಳು ವಿಫಲವಾಗಿದ್ದವು.

"ಖಾಸಗಿ ಎಂಜಿನಿಯರಿಂಗ್ ಕಾಲೇಜುಗಳಲ್ಲಿನ ಸರಕಾರಿ ಕೋಟಾದ ಸೀಟುಗಳ ಪ್ರವೇಶ ಶುಲ್ಕವನ್ನು ಶೇ. 10ರಷ್ಟು ಹೆಚ್ಚಿಸಲು ಸಮ್ಮತಿಸಲಾಗಿದೆ. ಇನ್ನು ಆರು ತಿಂಗಳಲ್ಲಿ ಸಮಿತಿ ರಚಿಸಿ ಶುಲ್ಕ ಪರಿಷ್ಕರಣೆ ಬಗ್ಗೆ ಪರಿಶೀಲನೆ ನಡೆಸಲಾಗುವುದೆಂದು ಉನ್ನತ ಶಿಕ್ಷಣ ಸಚಿವರು ಭರವಸೆ ನೀಡಿದ್ದರಿಂದ ಕಳೆದ ವರ್ಷದ ಶುಲ್ಕಕ್ಕಿಂತ ಶೇ. 10ರಷ್ಟು ಹೆಚ್ಚಿನ ಪ್ರಮಾಣದ ಶುಲ್ಕಕ್ಕೆ ಒಪ್ಪಿಗೆ ಸೂಚಿಸಲಾಗಿದೆ," ಎಂದು ಶಿಕ್ಷಣ ಸಂಸ್ಥೆಗಳ ಪ್ರತಿನಿಧಿಯೊಬ್ಬರು 'ವಿಕ'ಕ್ಕೆ ತಿಳಿಸಿದರು.

**ವೈದ್ಯ ಕೋರ್ಸ್ ಶುಲ್ಕ ಶೇ 8ರಷ್ಟು ಹೆಚ್ಚಳ:** ಖಾಸಗಿ ವೈದ್ಯ ಕಾಲೇಜುಗಳಲ್ಲಿನ ಸರಕಾರಿ ಕೋಟಾದ ವೈದ್ಯ ಸೀಟುಗಳ ಪ್ರವೇಶ ಶುಲ್ಕವನ್ನು ಶೇ. 8ರಷ್ಟು ಮಾತ್ರ ಹೆಚ್ಚಿಸಲು ಖಾಸಗಿ ವೈದ್ಯಕೀಯ ಕಾಲೇಜುಗಳು ನಿರ್ಧರಿಸಿವೆ.

ಖಾಸಗಿ ವೈದ್ಯಕೀಯ ಕಾಲೇಜುಗಳು ಶೇ. 20ರಷ್ಟು ಶುಲ್ಕ ಏರಿಕೆಗೆ ಬೇಡಿಕೆ ಇಟ್ಟಿದ್ದವು. ಆದರೆ, ಖಾಸಗಿ ಶಿಕ್ಷಣ ಸಂಸ್ಥೆಗಳ ಮನವೊಲಿಸಿದ ಹಿನ್ನೆಲೆಯಲ್ಲಿ, ಶೇ. 8ರಷ್ಟು ಶುಲ್ಕ ಹೆಚ್ಚಳಕ್ಕೆ ಸಮ್ಮತಿ ಸೂಚಿಸಿತು. ನ್ಯಾ. ಡಿ. ವಿ. ಶೈಲೇಂದ್ರ ಕುಮಾರ್ ನೇತೃತ್ವದ ಶುಲ್ಕ ನಿಯಂತ್ರಣಾ ಸಮಿತಿ ಶೇ. 8ರಷ್ಟು ಮಾತ್ರ ಶುಲ್ಕ ಹೆಚ್ಚಿಸಲು ಸಲಹೆ ನೀಡಿತ್ತು.

"2018-19ರಲ್ಲಿ ಶೇ. 8ರಷ್ಟು ಶುಲ್ಕ ಹೆಚ್ಚಳಕ್ಕೆ ನಾವು ಒಪ್ಪಿಗೆ ಸೂಚಿಸಿದ್ದೇವೆ," ಎಂದು ವೃತ್ತಿಪರ ಕಾಲೇಜುಗಳ ಪ್ರತಿಷ್ಠಾನದ ಡಾ. ಜಯರಾಂ ತಿಳಿಸಿದ್ದಾರೆ.